ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY
ಯರಗೇರಾ-584133, ರಾಯಚೂರು, ಕರ್ನಾಟಕ ರಾಜ್ಯ, ಭಾರತ
Office No.+91 9141030953 ಪರೀಕ್ಷಾ ವಿಭಾಗ E-mail: registrarevrur@gmail.com

ಕ್ರ.ಸಂ: ರಾವಿರಾ/ಪರೀಕ್ಷಾ/ಯು.ಜಿ/2024-25/ 490 ದಿನಾಂಕ:20.08.2024

**ಸುತ್ತೋಲೆ**

**ವಿಷಯ:** 2023-24ನೇ ಸಾಲಿನ ಸ್ನಾತಕ ದ್ವಿತೀಯ, ನಾಲ್ಕನೇ ಹಾಗೂ ಆರನೇ ಸೆಮಿಸ್ಟರ್‌ನ ಪರೀಕ್ಷೆಗಳನ್ನು ನಡೆಸುವ ಕುರಿತು.

*****

ಈ ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ರಾಯಚೂರು ವಿಶ್ವವಿದ್ಯಾಲಯದ ಅಧೀನಕ್ಕೆ ಒಳಪಡುವ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಿಳಿಯಪಡಿಸುವುದೇನೆಂದರೆ, 2023-24ನೇ ಸಾಲಿನ ಸ್ನಾತಕ ದ್ವಿತೀಯ, ನಾಲ್ಕನೇ ಹಾಗೂ ಆರನೇ ಸೆಮಿಸ್ಟರ್‌ನ ಪರೀಕ್ಷಾ ಕೇಂದ್ರಗಳನ್ನು ಹೊಂದಿರುವ ಕಾಲೇಜುಗಳು 03 ಸೆಷನ್‌ಗಳ ಪ್ರಶ್ನೆಪತ್ರಿಕೆಗಳನ್ನು ಬೆಳಿಗ್ಗೆ ತೆಗೆದುಕೊಂಡು ಹೋಗಿ ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕಿಂತ ಮುಂಚಿತವಾಗಿ ಪ್ರಶ್ನೆಪತ್ರಿಕೆಗಳ ಓಪನ್ ಆಗಿರುವ ಕುರಿತು ದೂರುಗಳು ಬಂದಿದ್ದು ಈ ಸಂಬಂಧ ಇಂತಹ ಪ್ರಕರಣಗಳು ಕಂಡುಬಂದಲ್ಲಿ ಅಂತಹ ಕಾಲೇಜುಗಳ ವಿರುದ್ಧ ಈ ಕೆಳಕಾಣಿಸಿದ ಕಠಿಣ ಕ್ರಮಗಳನ್ನು ವಿಶ್ವವಿದ್ಯಾಲಯದಿಂದ ಜರುಗಿಸಲಾಗುವುದು.

- ಪರೀಕ್ಷಾ ಕೇಂದ್ರವನ್ನು ರದ್ದುಗೊಳಿಸಲಾಗುವುದು.
- ರೂ. 50,000/- ಗಳ ದಂಡವನ್ನು ವಿಧಿಸುವುದು.
- ಆ ಕಾಲೇಜಿನ ಸಂಲಗ್ನತೆಯನ್ನು ರದ್ದುಗೊಳಿಸಲಾಗುವುದು.
- ಕಾಲೇಜುನ್ನು ಕಪ್ಪು ಪಟ್ಟಿಗೆ ಸೇರಿಸಿ ಕಾಲೇಜಿನ ಯಾವುದೇ ಸಿಬ್ಬಂದಿಯನ್ನು ವಿಶ್ವವಿದ್ಯಾಲಯದ ಯಾವುದೇ ಕಾರ್ಯಗಳಿಗೆ ನಿಯೋಜಿಸಲಾಗುವುದಿಲ್ಲ.

**ಸೂಚನೆ:** ಪ್ರತಿದಿನದ ಪ್ರಶ್ನೆಪತ್ರಿಕೆಗಳ ತೆಗೆಯುವ ಮತ್ತು ವಿತರಿಸುವ ವಿಡೀಯೊವನ್ನು ಕಡ್ಡಾಯವಾಗಿ **rurexams@gmail.com**ಗೆ ಕಳುಹಿಸಬೇಕಾಗಿ ಈ ಮೂಲಕ ಆದೇಶಿಸಲಾಗಿದೆ.

(ಪ್ರೊ. ಯರಿಸ್ವಾಮಿ ಎಂ.)
ಕುಲಸಚಿವರು (ಮೌಲ್ಯಮಾಪನ)
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು

**ಗೆ,**
ರಾಯಚೂರು ವಿಶ್ವವಿದ್ಯಾಲಯ ವ್ಯಾಪ್ತಿಯ ಸಂಲಗ್ನತೆ ಹೊಂದಿದ ಎಲ್ಲಾ ಪದವಿ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳ ಗಮನಕ್ಕೆ ಮತ್ತು ಸೂಕ್ತ ಕ್ರಮಕ್ಕಾಗಿ.

**ಪ್ರತಿಗಳು:**
1. ಉಪಕುಲಸಚಿವರು, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು
2. ಹಣಕಾಸು ಅಧಿಕಾರಿಗಳು, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ/ಕುಲಸಚಿವರು ಅವರ ಆಪ್ತ ಸಹಾಯಕರು, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
4. ಕಛೇರಿ ಪ್ರತಿ.